# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯ ಡಾ॥ ಬಿ.ಆರ್ ಅಂಬೇಡ್ಕರ್ ಡೆಂಟಲ್ ಕಾಲೇಜು, 2ನೇ ಮಹಡಿ ವಿ ಅಂಡ್ ಆರ್ ಕೊಠಡಿಯಲ್ಲಿ ದಿನಾಂಕ: 05-03-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಹಾಜರಿದ್ದ ಸದಸ್ಯರು,

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು

1. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಪಾಷಾ, ಸ್ಥಳೀಯರು,
3. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
4. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

- ವಾರ್ಡ್ ವ್ಯಾಪ್ತಿಯ ನಾಗಯ್ಯನಪಾಳ್ಯ ಹಾಗೂ ಇತರೆ ಪ್ರದೇಶಗಳಲ್ಲಿ ಚರಂಡಿಗಳಲ್ಲಿ ಡೆಬ್ರೀಸ್ ತುಂಬಿ ಚರಂಡಿ ನೀರು ರಸ್ತಗೆ ಹರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ ವಾರ್ಡ್ ವ್ಯಾಪ್ತಿಯಲ್ಲಿ ಅಂತಹ ಸ್ಥಳಗಳಲ್ಲಿ ಚರಂಡಿಯಲ್ಲಿರುವ ಹೂಳನ್ನು ತೆಗೆದು ಚರಂಡಿ ನೀರು ಸರಾಗವಾಗಿ ಹರಿಯಲು ಅನುವು ಮಾಡಿಕೊಡಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಈ ವರೆವಿಗೂ ತೆರವುಗೊಳಿಸಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದಾಗ ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ಮಾಹಿತಿ ನೀಡಲು ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯ ನಾಗಯ್ಯನಪಾಳ್ಯ ಮುಖ್ಯರಸ್ತೆ ಹಾಗೂ ಎಸ್.ಎಂ.ಆರ್ ವಾಟಿಕಾ ಅಪಾರ್ಟ್‌ಮೆಂಟ್ ಹತ್ತಿರ ವಾಹನ ಸಂಚಾರ ದಟ್ಟಣೆ ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟಲು ಸಂಚಾರಿ ಪೊಲೀಸರನ್ನು ನಿಯೋಜನೆ ಮಾಡಿ, ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಕ್ರಮ ವಹಿಸಲು ಸಭೆಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ನಾಗಯ್ಯನಪಾಳ್ಯ ಹಾಗೂ ಇತರೆ ಪ್ರದೇಶಗಳಲ್ಲಿ ಸಾರ್ವಜನಿಕರು ಮನೆಯ ಕಸ ಹಾಗೂ ಅಂಗಡಿ ಕಸವನ್ನು ಎಲ್ಲಂದರಲ್ಲಿ ಎಸೆದು ವಾತಾವರಣವನ್ನು ಕಲುಷಿತಗೊಳಿಸುತ್ತಿರುವುದು ಇತ್ತೀಚೆಗೆ ಹೆಚ್ಚಾಗುತ್ತಿದ್ದು, ಈ ಬಗ್ಗೆ ಘನತ್ಯಾಜ್ಯ ನಿರ್ವಹಣೆ ಮತ್ತು ಆರೋಗ್ಯ ಇಲಾಖೆಯ ವತಿಯಿಂದ ಕಸ ಸಂಗ್ರಹಣೆ ಮತ್ತು ವಿಲೇವಾರಿಗೆ ಸಂಬಂಧಿಸಿದಂತೆ ಜನ ಜಾಗರತಿ ಮೂಡಿಸುವುದು

ಅನಿವಾರ್ಯವಾಗಿರುವುದಾಗಿ, ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಕಸವನ್ನು ಪ್ರತಿ ನಿತ್ಯ ಕಸದ ವಾಹನಗಳಿಗೆ ಕಡ್ಡಾಯವಾಗು ನೀಡಲು ಹಾಗೂ ಕಸದ ವಾಹನಗಳಿಗೆ ನೀಡದೇ ಎಲ್ಲಂದರಲ್ಲಿ ಎಸೆಯುವವರು ಕಂಡು ಬಂದಲ್ಲಿ ಅಂತಹವರ ಮೇಲೆ ಸೂಕ್ತ ದಂಡವನ್ನು ವಿಧಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚೆಗೆ ವಿದ್ಯುತ್ ನಿಲುಗಡೆ ಹೆಚ್ಚಾಗುತ್ತಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ಹಾಗೂ ಜನ ಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಇಲಾಖೆಯವರ ಗಮನಕ್ಕೆ ತಂದು ಕೂಡಲೇ ಕ್ರಮ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿರುವ ವಾಣಿಜ್ಯ ಮಳಿಗೆಗಳಿಗೆ ಪಾಲಿಕೆಯ ವತಿಯಿಂದ ನೀಡಿರುವ ವಾಣಿಜ್ಯ ಚಟುವಟಿಕೆ ನಡೆಸಲು ಪರವಾನಿಗೆ ಪತ್ರವನ್ನು ಪರಿಶೀಲಿಸಿ, ಪರವಾನಿಗೆ ಇಲ್ಲದ ಅಂಗಡಿ ಮಾಲೀಕರ ವಿರುದ್ಧ ಸೂಕ್ತ ಕ್ರಮ ವಹಿಸಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಈ ಬಗ್ಗೆ ಕಂದಾಯ ಇಲಾಖೆಯ ಅಧಿಕಾರಿಗಳು ಈಗಾಗಲೇ ಕ್ರಮ ವಹಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಟ್ಟಿದ್ದು, ಈ ಬಗ್ಗೆ ಸಭೆಗೆ ಧನ್ಯವಾದಗಳನ್ನು ತಿಳಿಸಿ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ವಾಣಿಜ್ಯ ಅಂಗಡಿಗಳ ಪರವಾನಿಗೆಯನ್ನು ಪರಿಶೀಲಿಸಿ, ಅನಧಿಕೃತವಾಗಿ ನಡೆಸುವ ಅಂಗಡಿ ಮಾಲೀಕರು ವಿರುದ್ಧ ಸೂಕ್ತ ಕ್ರಮ ವಹಿಸಲು ಹಾಗೂ ಪರವಾನಿಗೆ ಪಡೆದು ಅಂಗಡಿ ಮಾಲೀಕರು ತಮ್ಮ ಪರವಾನಿಗೆ ಪತ್ರವನ್ನು ಸಾರ್ವಜನಿಕರಿಗೆ ಕಾಣುವಂತೆ ಅಂಗಡಿ ಮುಂದೆ ಪ್ರಚುರ ಪಡಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಲಿಂಗರಾಜಪುರ ಫ್ಲೈ ಓವರ್ ಕೆಳಗೆ ಸುಮಾರು ರಸ್ತೆಗುಂಡಿಗಳು ಬಿದ್ದಿದ್ದು, ಫ್ಲೈ ಓವರ್ ಕೆಳಗೆ ಸಾಮಾನ್ಯವಾಗಿ ಸ್ವಲ್ಪ ಕತ್ತಲು ಇರುವುದರಿಂದ ರಸ್ತೆ ಗುಂಡಿಗಳು ಕಾಣದೇ ಅಪಘಾತಗಳಾಗುವ ಸಾಧ್ಯತೆ ಇರುವುದರಿಂದ ಅವುಗಳನ್ನು ಕೂಡಲೇ ಮುಚ್ಚಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ಪ್ರದೇಶದಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಅತೀ ಶೀಘ್ರವಾಗಿ ಮುಚ್ಚಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಅನೇಕ ಮುಖ್ಯರಸ್ತೆ ಹಾಗೂ ಅಡ್ಡರಸ್ತೆಗಳಲ್ಲಿ ಸುಮಾರು ದಿನಗಳಿಂದ ಒಂದೇ ಜಾಗದಲ್ಲಿ ನಿಲುಗಡೆ ಮಾಡಿರುವ ಹಳೆಯ ವಾಹನಗಳಿಂದ ವಾಹನ ಸವಾರರಿಗೆ ಹಾಗೂ ಪಾದಾಚಾರಿಗಳಿಗೆ ತುಂಬಾ ತೊಂದರೆಯಾಗುತ್ತಿದ್ದು, ಅಂತಹ ವಾಹನಗಳ ಮಾಲೀಕರಿಗೆ ಸದರಿ ಸ್ಥಳದಿಂದ ತಮ್ಮ ವಾಹನಗಳನ್ನು ತೆರವುಗೊಳಿಸಲು ಕ್ರಮ ವಹಿಸಲು ಸಭೆಯಲ್ಲಿ ಸ್ಥಳೀಯರು ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಅಂತಹ ವಾಹನಗಳ ಮಾಲೀಕರಿಗೆ ಕೂಡಲೇ ತೆರವುಗೊಳಿಸಲು ಸೂಚಿಸುವುದು ಒಂದು ವೇಳೆ ಮಾಲೀಕರು ಲಭ್ಯವಿಲ್ಲದಿದ್ದಲ್ಲಿ ಅಂತಹ ಸ್ಥಳದಿಂದ ತೆರವುಗೊಳಿಸಲು ಸಂಚಾರಿ ಪೊಲೀಸ್‌ರಿಗೆ ಮಾಹಿತಿ ನೀಡಲು ಕೂಡಲೇ ತೆರವುಗೊಳಿಸಿ, ಸಾರ್ವಜನಿಕ ಸಂಚಾರಕ್ಕೆ ಅನುವು ಮಾಡಿಕೊಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ನಾಗಯ್ಯನಪಾಳ್ಯ ಹಾಗೂ ಸತ್ಯಾನಗರ ಪ್ರದೇಶದಲ್ಲಿ ರಾತ್ರಿ ಸಮಯದಲ್ಲಿ ಒಬ್ಬಂಟಿಯಾಗಿ ಓಡಾಡುವ ನಾಗರೀಕರಿಗೆ ಕೆಲವು ಪುಂಡ ಪೋಕಿರಿಗಳು ತೊಂದರೆ ಕೊಡುತ್ತಿರುವುದು

ಹಾಗೂ ಅಂತವರನ್ನು ಹೆದರಿಸಿ ಹಣ ದೋಚುತ್ತಿರುವುದು ಕಂಡು ಬಂದಿದ್ದು, ಸದರಿ ಪ್ರದೇಶಗಳಲ್ಲಿ ರಾತ್ರಿ ಸಮಯದಲ್ಲಿ ಹಾಗೂ ಬೆಳಗಿನ ಸಮಯದಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಿ, ಪುಂಡ ಪೋಕಿರಿಗಳ ಹಾವಳಿಯನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಸಂಬಂಧಪಟ್ಟ ಪೊಲೀಸ್ ಠಾಣೆಗೆ ಮಾಹಿತಿ ನೀಡಿ, ರಾತ್ರಿ ಸಮಯದಲ್ಲಿ ಹಾಗೂ ಬೆಳಗಿನ ಸಮಯದಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಲು ಕ್ರಮ ವಹಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

05/03/2022

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**ಪ್ರತಿಯನ್ನು,**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.